# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

## ಮುಕ್ತಗಂಗೋತ್ರಿ, ಮೈಸೂರು-570006

ದಿನಾಂಕ 19.02.2019 ರಂದು ಅಪರಾಹ್ನ 03.00 ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆಡಳಿತ ಭವನದ ಸಭಾಂಗಣದಲ್ಲಿ ಮಾನ್ಯ ಕುಲಪತಿಗಳಾದ ಪ್ರೊ. ಡಿ.ಶಿವಲಿಂಗಯ್ಯ ರವರ ಅಧ್ಯಕ್ಷತೆಯಲ್ಲಿ ನಡೆದ 5ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ನಡವಳಿ.

| ಉಪಸ್ಥಿತರು | |
|---|---|
| **ಪ್ರೊ. ಡಿ. ಶಿವಲಿಂಗಯ್ಯ**<br>ಮಾನ್ಯ ಕುಲಪತಿಗಳು ಹಾಗೂ<br>ಶೈಕ್ಷಣಿಕ ಮಂಡಳಿಯ ಅಧ್ಯಕ್ಷರು,<br>ಕರಾಮುವಿ, ಮೈಸೂರು. | **ಪ್ರೊ. ರಮೇಶ್. ಬಿ**<br>ಕುಲಸಚಿವರು<br>ಕರಾಮುವಿ,<br>ಮೈಸೂರು. |
| **ಪ್ರೊ. ಜಗದೀಶ**<br>ಡೀನ್ (ಶೈಕ್ಷಣಿಕ) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. | **ಡಾ. ಎ. ಖಾದರ್ ಪಾಷಾ**<br>ಹಣಕಾಸು ಅಧಿಕಾರಿಗಳು ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. |
| **ಪ್ರೊ. ಡಿ.ಬಿ. ಬಸವರಾಜ್**<br>ಡೀನ್ (ಅಧ್ಯಯನ ಕೇಂದ್ರಗಳು) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. | **ಡಾ. ಎಂ.ಎಸ್. ರಮಾನಂದ**<br>ಕುಲಸಚಿವ (ಪರೀಕ್ಷಾಂಗ) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. |
| **ಡಾ|| ಲಕ್ಷ್ಮಿ.ಎನ್**<br>ಮುಖ್ಯಸ್ಥರು, ಶಿಕ್ಷಣ ಶಾಸ್ತ್ರ ವಿಭಾಗ ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು | |
| **ವಿಶೇಷ ಆಹ್ವಾನಿತರು** | |
| **ಡಾ. ಪ್ರಕಾಶ್,**<br>ನಿರ್ದೇಶಕರು – ಐ.ಟಿ. | **ಡಾ. ಶಲ್ವಪಿಳ್ಳೆ ಅಯ್ಯಂಗಾರ್,**<br>ನಿರ್ದೇಶಕರು (ಪ್ರವೇಶಾತಿ) |

ಸಭೆಗೆ ಹಾಜರಾಗಿದ್ದ ಸದಸ್ಯರುಗಳನ್ನು ಮಾನ್ಯ ಕುಲಪತಿಗಳು ಸ್ವಾಗತಿಸುವುದರೊಂದಿಗೆ ಸಭೆಯು ಪ್ರಾರಂಭವಾಯಿತು. ಮುಂದುವರೆದು ಮಾನ್ಯ ಕುಲಪತಿಗಳು ಮಾತನಾಡುತ್ತಾ ಶೈಕ್ಷಣಿಕ ಮಂಡಳಿ ಸಭೆಯನ್ನು ಕರೆದಿರುವ ಉದ್ದೇಶವನ್ನು ಸದಸ್ಯರುಗಳ ಗಮನಕ್ಕೆ ತಂದರು.

ಕುಲಸಚಿವರು

ಕುಲಪತಿಗಳು 19/2

ವಿಷಯ ಸಂಖ್ಯೆ : 5:01

**ವಿಷಯ:** ಕರಾಮುವಿಯ ಬಿ.ಇಡಿ. ಕೋರ್ಸ್‌ಗೆ ಸರ್ಕಾರದ ನಿಯಮದಂತೆ ಮೀಸಲಾತಿಯನ್ನು ಅಳವಡಿಸಿಕೊಳ್ಳಲು ದಿನಾಂಕ: 17.02.2019 ರಂದು ನಡೆದ ಆಯ್ಕೆಯ ಸಮಿತಿ / ತಜ್ಞರ ಸಭಾ ನಡವಳಿ ಅನುಮೋದಿಸುವ ಕುರಿತು..

*****

**ತೀರ್ಮಾನ : ಬಿ.ಇಡಿ. ಕೋರ್ಸ್‌ಗೆ ಬಹಳ ಬೇಡಿಕೆ ಇದ್ದು, ಪ್ರವೇಶಾತಿಯಲ್ಲಿ ಮೀಸಲಾತಿಯನ್ನು ಸರ್ಕಾರದ ಆದೇಶಾನುಸಾರವಾಗಿ ಅಳವಡಿಸಿಕೊಳ್ಳಲು ಆಯ್ಕೆ ಸಮಿತಿ / ತಜ್ಞರ ಸಭಾ ನಡಾವಳಿಯನ್ನು ಅನುಮೋದಿಸಲಾಯಿತು.**

——

ವಿಷಯ ಸಂಖ್ಯೆ : 5:02

**ವಿಷಯ: 2018–19ನೇ ಶೈಕ್ಷಣಿಕ ವರ್ಷದಿಂದ ವಿಶ್ವವಿದ್ಯಾನಿಲಯವು ನಡೆಸುವ ವಿವಿಧ ಶಿಕ್ಷಣಕ್ರಮಗಳಿಗೆ ಕೌಶಲಾಭಿವೃದ್ಧಿ ತರಬೇತಿ ಶಿಕ್ಷಣ ನೀಡುವ ಹಾಗೂ ಅವುಗಳ ಪಠ್ಯಕ್ರಮಗಳನ್ನು ಅನುಮೋದಿಸುವ ಕುರಿತು.**

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ. 2018–19ನೇ ಶೈಕ್ಷಣಿಕ ವರ್ಷದಿಂದ ವಿಶ್ವವಿದ್ಯಾನಿಲಯವು ನಡೆಸುತ್ತಿರುವ ವಿವಿಧ ಶಿಕ್ಷಣಕ್ರಮಗಳಿಗೆ ಕೌಶಲಾಭಿವೃದ್ಧಿ ತರಬೇತಿ ಶಿಕ್ಷಣ ಕಡ್ಡಾಯವಾಗಿರುತ್ತದೆ. ಈ ತರಬೇತಿ ಶಿಕ್ಷಣವು ವಿಶ್ವವಿದ್ಯಾನಿಲಯದಲ್ಲಿ ಸ್ನಾತಕ/ಸ್ನಾತಕೊತ್ತರ ಕೋರ್ಸ್‌ಗಳಿಗೆ ಅನುಗುಣವಾಗಿ ಕೌಶಲಾಭಿವೃದ್ಧಿ ತರಬೇತಿ ಶಿಕ್ಷಣವನ್ನು ಕೊಡುವ ಸಲುವಾಗಿ ವಿಶ್ವವಿದ್ಯಾನಿಲಯವು 07 ವಿಷಯಗಳನ್ನು ಗುರುತಿಸಿದೆ.

1. ಆಡಳಿತ ಕನ್ನಡ
2. English for Communication & Soft Skills
3. Web Designing
4. Computer Fundamentals
5. Desk Top Publishing
6. Multimedia
7. Basics of Networking

ಮೇಲ್ಕಂಡ 7 ಕಾರ್ಯಕ್ರಮಗಳ ಸ್ನಾತಕ/ಸ್ನಾತಕೊತ್ತರ ಕೋರ್ಸ್‌ಗಳಿಗೆ ಈಗಾಗಲೇ 46ನೇ ಶೈಕ್ಷಣಿಕ ಸಭೆ ಹಾಗೂ 151ನೇ ವ್ಯವಸ್ಥಾಪನ ಮಂಡಳಿ ಸಭೆಯಲ್ಲಿ ಅನುಮೋದನೆಯಾಗಿದೆ.

ಅ. ಸದರಿ ವಿಷಯದ ಸಮಿತಿ ಸಭೆಯನ್ನು ದಿನಾಂಕ: 11–01–2019 ರಂದು ನಡೆಸಿದ್ದು, ಸಭೆಯ ನಡಾವಳಿಯನ್ನು ಅನುಮೋದಿಸಲು, ಹಾಗೂ

ಆ. ಸ್ನಾತಕ/ಸ್ನಾತಕೊತ್ತರ ಕೋರ್ಸ್‌ಗಳಿಗೆ ಪಠ್ಯಕ್ರಮಗಳನ್ನು ವಿವಿಧ ವಿಭಾಗಗಳು ಸಿದ್ಧಪಡಿಸಿ ಸಲ್ಲಿಸಿದ್ದು ಶೈಕ್ಷಣಿಕ ಸಭೆಯಲ್ಲಿ ಮಂಡಿಸಿದ್ದು ಅನುಮೋದನೆ ಕೋರಿದೆ.

ಕುಲಸಚಿವರು

ಕುಲಪತಿಗಳು

19/2

ತೀರ್ಮಾನ : ಕೌಶಲ್ಯಾಭಿವೃದ್ಧಿ ಉಪಸಮಿತಿಯು ನೀಡಿರುವ ನಡಾವಳಿಯನ್ನು ಚರ್ಚಿಸಿ ಕೆಳಕಂಡ ಮಾರ್ಪಾಡುಗಳನ್ನು ಮಾಡಿ, ವಿಷಯವನ್ನು ಅನುಮೋದಿಸಲಾಯಿತು.

1. ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವು ಕಡ್ಡಾಯವಾಗಿರುವುದಿಲ್ಲ.
2. ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವನ್ನು ನಿರ್ವಹಿಸುವ ಜವಾಬ್ದಾರಿ ಡೀನ್ (ಅಧ್ಯಯನ ಕೇಂದ್ರ) ದವರದ್ದಾಗಿರುತ್ತದೆ.
3. ಡೀನ್ (ಅಧ್ಯಯನ ಕೇಂದ್ರ) ರವರ ಮಾರ್ಗದರ್ಶನದಲ್ಲಿ ಸದರಿ ತರಬೇತಿ ಕ್ರಮವನ್ನು ಅನುಷ್ಠಾನಗೊಳಿಸಲು ಒಬ್ಬರು ಸಂಯೋಜನಾಧಿಕಾರಿಯವರನ್ನು ನಿಯೋಜಿಸಲು ತೀರ್ಮಾನಿಸಿತು.

-----

ಅಂತಿಮವಾಗಿ 5ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಗೆ ಆಗಮಿಸಿ ಮಂಡಿತ ವಿಷಯಗಳ ಬಗ್ಗೆ ಚರ್ಚಿಸಿ, ತಮ್ಮ ಅಮೂಲ್ಯ ಸಲಹೆ, ಸೂಚನೆಗಳನ್ನು ನೀಡಿ, ಸಭೆಯನ್ನು ಸೂಸೂತ್ರವಾಗಿ ನಡೆಸಿಕೊಟ್ಟಿದ್ದಕ್ಕೆ ಎಲ್ಲ ಸದಸ್ಯರುಗಳಿಗೂ ಮಾನ್ಯ ಕುಲಪತಿಗಳು ಧನ್ಯವಾದಗಳನ್ನು ತಿಳಿಸುವುದರೊಂದಿಗೆ ಸಭೆಯು ಮುಕ್ತಾಯಗೊಂಡಿತು.

ಕುಲಸಚಿವರು ಹಾಗೂ
ಸದಸ್ಯ ಕಾರ್ಯದರ್ಶಿಗಳು

ಕುಲಪತಿಗಳು ಹಾಗೂ ಅಧ್ಯಕ್ಷರು 19/2